**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.738/2014**

ಪಿ.ಡಬ್ಲ್ಯೂಃ 1

**ದಿನಾಂಕ: 17-02-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

ಮುಂದುವರಿದ **ಮುಖ್ಯ ವಿಚಾರಣೆ ಃ** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಆರೋಪಿಯು ಈ ದಿನ ನ್ಯಾಯಾಲಯದಲ್ಲಿ ಗೈರು ಹಾಜರಾಗಿದ್ದು, ಆರೋಪಿ ಪರ ವಕೀಲರು ಆರೋಪಿಯ ಗುರುತಿಸುವಿಕೆ ಬಗ್ಗೆ ತಕರಾರು ಇಲ್ಲ ಎಂದು ತಿಳಿಸಿರುತ್ತಾರೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಪ್ರಥಮ ವರ್ತಮಾನ ವರದಿಯಗಿದ್ದು, ಸದರಿ ದಾಖಲೆಯನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮತ್ತು ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಸಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು 3 ಆರೋಪಿತರ ಸ್ವಇಚ್ಚಾ ಹೇಳಿಕೆ , ಸದರಿ ದಾಖಲೆಯನ್ನು ನಿಪಿ-3, 4 ಮತ್ತು 5 ಎಂದು, ಸಾಕ್ಷಿಯ ಸಹಿಯನ್ನು ನಿಪಿ-3(ಎ) ರಿಂದ 5(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಕಾರಿನ ಮಾಲೀಕನ ಹೇಳಿಕೆ ಆಗಿದ್ದು, ಸದರಿ ದಾಖಲೆಯನ್ನು ನಿಪಿ-6 ಎಂದು, ಸಾಕ್ಷಿಯ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲು ಃ ಆರೋಪಿ ಪರ** ಶ್ರೀ ಎಎ **ವಕೀಲರಿಂದ.**

ನಾನು ತರೀಕೆರೆಯಿಂದ ಲಕ್ಕವಳ್ಳಿ ಕಡೆ ಹೋಗುತ್ತಿರುವ ರಸ್ತೆಯಲ್ಲಿ ಮಾಹಿತಿ ಬಂದ ಮೇರೆಗೆ ನಿಂತು ವಾಹನಗಳನ್ನು ಗಮನಿಸುತ್ತಿದ್ದೆ. ಬೇರೆ ಯಾವುದೇ ವಾಹನಗಳು ಆ ರಸ್ತೆಯಲ್ಲಿ ಓಡಾಡಿರಲಿಲ್ಲ. ಸದರಿ ರಸ್ತೆ ಟಾರು ರಸ್ತೆ ಆಗಿತ್ತು. ನೀವು ಆದಿನ ಯಾವುದೇ ಗಸ್ತಿನಲ್ಲಿ ಇರಲಿಲ್ಲ

ಎಂದರೆ ಸರಿಯಲ್ಲ. ಹಾಗೂ ಯಾವುದೇ ಅಂಬಾಸಿಡರ್ ಕಾರ್ ಬಂದಿರುವುದಿಲ್ಲ ಎಂದರೆ ಸರಿಯಲ್ಲ. ಸ್ಥಳ ಮಹಜರ್ ಸಮಯದಲ್ಲಿ ಪಂಚರಿಗೆ ನೋಟಿಸ್ ನೀಡಿರುತ್ತಿರಾ ಎಂದರೆ ಸಾಕ್ಷಿ ನಾನು ಜೊತೆಯಲ್ಲಿ ಕರೆದುಕೊಂಡು ಹೋಗಿರುತ್ತೇನೆಂದು ನುಡಿದಿರುತ್ತಾರೆ. ನೀವು ಆರೋಪಿತರ ಸ್ವಇಚ್ಛಾ ಹೇಳಿಕೆಯನ್ನು ಪಡೆದುಕೊಂಡಿಲ್ಲ ಪ್ರಕರಣಕ್ಕೋಸ್ಕರ ಸೃಷ್ಠಿ ಮಾಡಿರುತ್ತಿರಾ ಎಂದರೆ ಸರಿಯಲ್ಲ. ಸದರಿ ಪ್ರಕರಣದಲ್ಲಿ ದೂರುದಾರರು ನಾನೇ ಆಗಿದ್ದು, ದೋಷರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿ. ಸಾಕ್ಷಿ ಮುಂದುವರಿದು ಮೇಲಾಧಿಕಾರಿಗಳ ಅನುಮತಿಯನ್ನು ಪಡೆದುಕೊಂಡಿರುತ್ತೇನೆಂದು ನುಡಿದಿರುತ್ತಾರೆ. ಆರೋಪಿ ಯಾವುದೇ ತಪ್ಪು ಮಾಡದೇ ಇದ್ದರೂ ಸಹ ಅವರ ವಿರುದ್ದ ದೋಷರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತಿರಾ ಎಂದರೆ ಸರಿಯಲ್ಲ. ಸ್ಥಳದಲ್ಲಿ ಯಾವುದೇ ಮಹಜರ್ ಜರುಗಿಸಿಲ್ಲ, ಕಾರನ್ನು ಅಮಾನತ್ತುಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆಃ** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಕೇ. ಸ. ಇ. ಎ. ಒ.

ಸಹಿ/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**